ಕಂ/ಉಪಲೋಕ್/ಬಿಜಿಎಂ/1202/2021
ಪಿ.ಓ.ಎ.ಆರ್.ಇ-5

# ಕರ್ನಾಟಕ ಲೋಕಾಯುಕ್ತ

**ಕಂಪ್ಲೆಂಟ್/ಉಪಲೋಕ್/ಬಿ.ಜಿ.ಎಂ./1202/2021**
**ಪಿಓ.ಎ.ಆರ್.ಇ-5**

ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ ವೀಧಿ,
ಬೆಂಗಳೂರು ದಿನಾಂಕ :24/11/2021

## ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ವರದಿ

**ವಿಷಯ: ಶ್ರೀ.ದೊಡ್ಡಪ್ಪ ಮೂಲಿಮನಿ ಬಿನ್ ನಾರಾಯಣಪ್ಪ, ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು, ಗದಗ ಇವರು ಸರ್ಕಾರಿ ನೌಕರರಾಗಿ ಕೆಲಸ ನಿರ್ವಹಿಸುವ ಕಾಲಕ್ಕೆ ದುರ್ನಡತೆ ಎಸಗಿರುವ ಕುರಿತಂತೆ ಶಿಸ್ತು ನಡವಳಿ ಜರುಗಿಸುವ ಬಗ್ಗೆ.**

****

1. ಆರಕ್ಷಕ ನಿರೀಕ್ಷಕರು ಭ್ರಷ್ಟಾಚಾರ ನಿಗ್ರಹ ದಳ ಪೋಲಿಸ್ ಠಾಣೆ ಗದಗ (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಇವರು ಸಲ್ಲಿಸಿದ ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ. **ಶ್ರೀ. ದೊಡ್ಡಪ್ಪ ಮೂಲಿಮನಿ ಬಿನ್ ನಾರಾಯಣಪ್ಪ, ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು, ಗದಗ** (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ನಿಮ್ಮ ಮೇಲೆ **ಶ್ರೀ. ಶೇಖರಪ್ಪ ಖಂಡಪ್ಪ ಪೂಜಾರ್, ಬೆಣಚಮಟ್ಟಿ ಗ್ರಾಮ** (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ದೂರು ಸಲ್ಲಿಸಿದ್ದು, ದೂರಿನಲ್ಲಿ ತಾನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತನಾಗಿ ರೋಣ ತಾಲ್ಲೂಕು ಕುಂಟೋಜಿ ಗ್ರಾಮಪಂಚಾಯಿತಿಯ ವ್ಯಾಪ್ತಿಯ ಆರು ಹಳ್ಳಿಗಳಲ್ಲಿ ಕಾರ್ಯಕರ್ತನಾಗಿ ಕೆಲಸ ಮಾಡಿದ ಬಾಬತ್ತು ಏಪ್ರಿಲ್ 2016 ರಿಂದ ಆಗಸ್ಟ್ 2016 ಅಂದರೆ ಐದು ತಿಂಗಳ ಗೌರವಧನ ಮಂಜೂರು ಮಾಡಲು ಎದುರುದಾರರು 3,000/- ರೂ. ಲಂಚದ ಹಣಕ್ಕಾಗಿ ಬೇಡಿಕೆಯಿಟ್ಟು ದುರ್ನಡತೆ ತೋರಿಸಿದ ಬಗ್ಗೆ ಬರೆದುಕೊಂಡಿದ್ದು ಸದರಿ ದೂರು ದಿ: 25/10/2016 ರಂದು ಗದಗ ಎ.ಸಿ.ಬಿ ಪೋಲಿಸ್ ಠಾಣಾ ಗುನ್ನಾ ನಂ.02/2016 ರಲ್ಲಿ ದಾಖಲಾಗಿದ್ದು, ತನಿಖಾಧಿಕಾರಿಗಳು ತನಿಖೆಯನ್ನು ಪೂರೈಸಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಕಲಂ 7, 13(1)(ಡಿ) ರೆ/ವಿ. 13(2) ಅಡಿಯಲ್ಲಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ದೋಷರೋಪಣ ಪಟ್ಟಿಯನ್ನು ಪರಿಶೀಲಿಸಲಾಗಿ ಎದುರುದಾರರು ಸರ್ಕಾರಿ ನೌಕರರಾಗಿ ಕರ್ತವ್ಯ ನಿರ್ವಹಿಸುವ ಕಾಲಕ್ಕೆ 3,000/-ರೂ. ಲಂಚ ಪಡೆದು ದುರ್ನಡತೆ ತೋರಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(1) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರು ಸ್ವಯಂಪ್ರೇರಿತವಾಗಿ ದೂರನ್ನು ದಾಖಲಿಸಿಕೊಂಡು ತನಿಖೆಯನ್ನು ಕೈಗೊಂಡಿರುತ್ತಾರೆ.

**2. ಪ್ರಕರಣದ ಸಂಕ್ಷಿಪ್ತ ಸಾರಾಂಶ:**

i. ದೂರುದಾರರಾದ ಶ್ರೀ. ಶೇಖರಪ್ಪ ಖಂಡಪ್ಪ ಪೂಜಾರ್, ಬೆಣಚಮಟ್ಟಿ ಗ್ರಾಮ ಇವರು ತಮ್ಮ ದೂರಿನಲ್ಲಿ ಬರೆದುಕೊಂಡ ಅಂಶವೇನೆಂದರೆ ತಾನು ಗ್ರಾಮೀಣ ಪುನರ್‌ವಸತಿ ಕಾರ್ಯಕರ್ತನಾಗಿ ರೋಣ ತಾಲ್ಲೂಕು ಕುಂಟೋಜಿ ಗ್ರಾಮಪಂಚಾಯಿತಿಯ ವ್ಯಾಪ್ತಿಯ ಆರು ಹಳ್ಳಿಗಳಲ್ಲಿ ಕೆಲಸ ಮಾಡಿದ ಬಾಬತ್ತು ಏಪ್ರಿಲ್ 2016 ರಿಂದ ಆಗಸ್ಟ್ 2016 ಅಂದರೆ ಐದು ತಿಂಗಳ ಗೌರವಧನ 10,000/- ರೂ. ಮಂಜೂರು ಮಾಡಲು ಈಗ್ಗೆ 15 ದಿನಗಳ ಹಿಂದೆ ತಾನು ಎದುರುದಾರರನ್ನು ಭೇಟಿಯಾಗಿ ಕೇಳಲಾಗಿ, ಎದುರುದಾರರು 3,000/- ರೂ. ಲಂಚದ ಹಣಕ್ಕಾಗಿ ಬೇಡಿಕೆಯಿಟ್ಟಿರುತ್ತಾರೆ ಮತ್ತು ಹಿಂದಿನ ಗೌರವಧನವನ್ನು ಕೊಡಲು ಬರುವುದಿಲ್ಲವೆಂದು ತಿಳಿಸಿರುತ್ತಾರೆ. ದೂರುದಾರರು ತನಗೆ ನೀಡಿದ ಎಸ್.ಬಿ.ಐ. ಚೆಕ್ ಸಂ.496240 ಇದನ್ನು ವಿಸ್ತರಿಸಿ ಕೊಡಲು ಅರ್ಜಿ ಸಲ್ಲಿಸಿದ್ದು, ಅದರ ಬಗ್ಗೆ ಯಾವುದೇ ಕ್ರಮ ಜರುಗಿಸಿರುವುದಿಲ್ಲ.

ii. ದೂರುದಾರರಿಗೆ ಲಂಚ ನೀಡಲು ಮನಸ್ಸಿಲ್ಲವಾದ್ದರಿಂದ ದಿ:25/10/2016 ರಂದು ಗದಗ ಎಸಿಬಿ ಪೋಲಿಸ್ ಠಾಣೆಗೆ ಹೋಗಿ ದೂರು ಸಲ್ಲಿಸಿದ್ದು, ಸದರಿ ದೂರು ಠಾಣಾ ಗುನ್ನಾ ನಂ.02/2016 ರಲ್ಲಿ, ಕಲಂ 7 ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿಯಲ್ಲಿ ಪ್ರಕರಣವು ದಾಖಲಾಗಿರುತ್ತದೆ. ಪ್ರಕರಣವು ದಾಖಲಾದ ನಂತರ ತನಿಖಾಧಿಕಾರಿಗಳು ಸರ್ಕಾರಿ ಪಂಚರುಗಳಾದ 1) ಟೇಕಪ್ಪ ಲಮಾಣಿ (ನೆರಳುಸಾಕ್ಷಿ), 2) ಪವನ್ ಬೂದಿಹಾಳ್ ಇವರುಗಳನ್ನು ಬರಮಾಡಿಕೊಂಡಿದ್ದು, ಸದರಿಯವರುಗಳ ಸಮಕ್ಷಮ ದೂರುದಾರರು ಹಾಜರುಪಡಿಸಿದ (ಲಂಚ ನೀಡಲು ತಂದ) ರೂ. 3,000/- (500ಘ6) ಗಳನ್ನು ದೂರುದಾರರು ತನಿಖಾಧಿಕಾರಿಗಳ ಮುಂದೆ ಹಾಜರುಪಡಿಸಿದ್ದು, ಸದರಿ ನೋಟುಗಳ ನಂಬರುಗಳನ್ನು ಪಂಚರು ದಾಖಲಿಸಿಕೊಂಡಿರುತ್ತಾರೆ. ಪೋಲಿಸ್ ಸಿಬ್ಬಂದಿ ನೋಟುಗಳಿಗೆ ಫಿನಾಪ್ತಲಿನ್ ಪೌಡರನ್ನು ಸವರಿದ್ದು, ಸದರಿ ಹಣವನ್ನು ಪಂಚಸಾಕ್ಷಿ-2 ಪವನ್ ಬೂದಿಹಾಳ್ ಇವರ ಮೂಲಕ ದೂರುದಾರರ ಪ್ಯಾಂಟ್ ಜೇಬಿನಲ್ಲಿ ಇಡಿಸಿರುತ್ತಾರೆ. ನಂತರ ಪವನ್ ಬೂದಿಹಾಳ್ ಇವರ ಎರಡು ಕೈಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿದ್ದು, ಫಿನಾಪ್ತಲಿನ್ ಪೌಡರಿನ ಗುಣಧರ್ಮವನ್ನು ದೂರುದಾರರು ಹಾಗೂ ಪಂಚರಿಗೆ ಮನವರಿಕೆ ಮಾಡಿಕೊಟ್ಟಿರುತ್ತಾರೆ. ನೆರಳುಸಾಕ್ಷಿಯಾದ ಟೇಕಪ್ಪ ಲಮಾಣಿ ಇವರಿಗೆ ದೂರುದಾರರೊಂದಿಗೆ ಹೋಗಿ ಲಂಚವನ್ನು ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆ ಹಾಗೂ ವಿದ್ಯಮಾನಗಳನ್ನು ಗಮನಿಸಬೇಕು ಎಂದು ಸೂಚನೆ ನೀಡಿರುತ್ತಾರೆ. ಎದುರುದಾರರು ಲಂಚದ ಹಣವನ್ನು ಕೇಳಿದಾಗ ಮಾತ್ರ ಕೊಡುವಂತೆ ಮತ್ತು ಹಣ

ಪಡೆದುಕೊಂಡ ನಂತರ ಕರವಸ್ತ್ರದಿಂದ ಮುಖ ಒರೆಸಿಕೊಳ್ಳುವ ಮೂಲಕ ಸಂಜ್ಞೆ ನೀಡಬೇಕೆಂದು ತಿಳಿಸಿರುತ್ತಾರೆ. ಹಣ ನೀಡುವ ಕಾಲಕ್ಕೆ ನಡೆಯುವ ಸಂಭಾಷಣೆಯನ್ನು ದೂರುದಾರರಿಗೆ ತಮ್ಮ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಳ್ಳಲು ತಿಳಿಸಿರುತ್ತಾರೆ. ಈ ಎಲ್ಲಾ ಘಟನಾವಳಿಗಳನ್ನು ದಿ: 25-10-2016 ರಂದು ಮಧ್ಯಾಹ್ನ 2.45 ರಿಂದ 4.15 ಘಂಟೆಯವರೆಗೆ ಗದಗ ಎಸಿಬಿ ಕಛೇರಿಯಲ್ಲಿ ಬರೆದ ಪ್ರಾಯೋಗಿಕ ಪಂಚನಾಮೆಯಲ್ಲಿ ದಾಖಲಿಸಿರುತ್ತಾರೆ.

iii) ಪ್ರಾಯೋಗಿಕ ಪಂಚನಾಮೆ ಮುಗಿದ ನಂತರ ದಾಳಿ ತಂಡದವರು ಎದುರುದಾರರು ಕೆಲಸ ಮಾಡುವ ಕಾರ್ಯಾಲಯವನ್ನು ತಲುಪಿ, ದೂರುದಾರರು ಹಾಗೂ ನೆರಳು ಸಾಕ್ಷಿ ಟೇಕಪ್ಪ ಲಮಾಣಿ ಇವರನ್ನು ಎದುರುದಾರರು ಕೆಲಸ ಮಾಡುವ ಕಾರ್ಯಾಲಯದ ಒಳಗೆ ಕಳುಹಿಸಿದ್ದು, ದಾಳಿ ತಂಡದವರು ಸ್ವಲ್ಪ ದೂರದಲ್ಲಿ ಮರೆಯಾಗಿ ನಿಂತಿರುತ್ತಾರೆ. ಸ್ವಲ್ಪ ಹೊತ್ತಿನ ನಂತರ ಅಂದರೆ ಸುಮಾರು 4.15 ಗಂಟೆಗೆ ದೂರುದಾರರು ಕೊಠಡಿ ಸಂ.6ರ ಹತ್ತಿರ ಬಂದು ಕರವಸ್ತ್ರದಿಂದ ಮುಖ ಒರೆಸಿಕೊಳ್ಳುವ ಮೂಲಕ ಸನ್ನೆ ಮಾಡಿದ್ದು, ತಕ್ಷಣ ತನಿಖಾಧಿಕಾರಿಗಳು ಎದುರುದಾರರ ಕಾರ್ಯಲಯದ ಒಳಗೆ ಬಂದು ತಮ್ಮ ಪರಿಚಯ ಮಾಡಿಕೊಂಡು ತನಿಖೆಗೆ ಸಹಕರಿಸುವಂತೆ ಎದುರುದಾರರಿಗೆ ತಿಳಿಸಿರುತ್ತಾರೆ. ಹಣದ ಬಗ್ಗೆ ವಿಚಾರಿಸಲಾಗಿ ಎದುರುದಾರರು ಹಣವನ್ನು ಶರ್ಟ್ ಜೇಬಿನಲ್ಲಿ ಇಟ್ಟುಕೊಂಡಿರುವುದಾಗಿ ತಿಳಿಸಿದ್ದು, ಸದರಿ ಹಣವನ್ನು ತನಿಖಾಧಿಕಾರಿಯವರ ಸೂಚನೆ ಮೇರೆಗೆ ಪಂಚಸಾಕ್ಷಿ-1 ಟೇಕಪ್ಪ ಲಮಾಣಿ ಇವರು ಎದುರುದಾರರ ಜೇಬಿನಿಂದ ತೆಗೆದು ನೋಟುಗಳ ನಂಬರುಗಳನ್ನು ತಾವು ಈ ಮೊದಲು ದಾಖಲಿಸಿಕೊಂಡ ನೋಟಿನ ನಂಬರುಗಳೊಂದಿಗೆ ತಾಳೆ ಮಾಡಿ, ತಾಳೆ ಹೊಂದಿದ ಮೇರೆಗೆ ಹಣವನ್ನು ತನಿಖಾಧಿಕಾರಿಗಳು ಅಮಾನತ್ತು ಪಡಿಸಿಕೊಂಡಿರುತ್ತಾರೆ. ಎದುರುದಾರರ ಎರಡು ಕೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಎದುರುದಾರರ ಶರ್ಟ್ ಜೇಬಿನ ಒಳಭಾಗವನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ತೊಳೆಯಲಾಗಿ ಅದು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಹಣ ನೀಡುವ ಕಾಲಕ್ಕೆ ರೆಕಾರ್ಡ್ ಮಾಡಿಕೊಂಡ ಸಂಭಾಷಣೆಯ ಬಗ್ಗೆ ದೂರುದಾರರನ್ನು ವಿಚಾರಿಸಲಾಗಿ, ದೂರುದಾರರು ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡ ಸಂಭಾಷಣೆಯನ್ನು ಸಿ.ಡಿ.ಗೆ ವರ್ಗಾಯಿಸಿಕೊಂಡಿರುತ್ತಾರೆ. ತನಿಖಾಧಿಕಾರಿಗಳು ಎದುರುದಾರರಿಂದ ಲಿಖಿತ ರಕ್ಷಣಾತ್ಮಕ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ಎದುರುದಾರರು ಬರೆದುಕೊಂಡ ರಕ್ಷಣಾತ್ಮಕ ಹೇಳಿಕೆಯು ಅಸಮಂಜಸ ಹಾಗೂ ಅಸಂಬದ್ಧವಾಗಿರುತ್ತದೆಂದು ದೂರುದಾರರು ಹಾಗೂ ನೆರಳು ಸಾಕ್ಷಿ

ಹೇಳಿರುತ್ತಾರೆ. ತನಿಖಾಧಿಕಾರಿಗಳು ಕಡತದ ಬಗ್ಗೆ ವಿಚಾರಿಸಲಾಗಿ, ಎದುರುದಾರರು ಅಟೆಂಡರ್ ರುದ್ರಪ್ಪ ಬಳಿಗಾರ್ ಇವರ ಮೂಲಕ ಪ್ರಕರಣಕ್ಕೆ ಸಂಬಂಧಿಸಿದ ಕಡತವನ್ನು ಹಾಜರುಪಡಿಸಿದ್ದು, ಅದರ ಛಾಯಾ ಪ್ರತಿಗಳನ್ನು ಶ್ರೀಮತಿ. ಆರ್.ಸಿ. ಹಿರೇಮಠ್ ಇವರಿಂದ ದೃಢೀಕರಿಸಿ ಅಮಾನತ್ತು ಪಡಿಸಿಕೊಂಡಿರುತ್ತಾರೆ. ಈ ಎಲ್ಲಾ ಪ್ರಕ್ರಿಯೆಗಳನ್ನು ತನಿಖಾಧಿಕಾರಿಗಳು ದಿ: 25/10/2016 ರಂದು ಸಂಜೆ 4.45 ರಿಂದ ರಾತ್ರಿ 10 ಗಂಟೆಯವರೆಗೆ ಗದಗ ಜಿಲ್ಲಾಡಳಿತ ಭವನದ ಕೊಠಡಿ ಸಂ.6ರಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಬರೆದ ಟ್ರ್ಯಾಪ್ ಮಹಜರ್‌ನಲ್ಲಿ ದಾಖಲಿಸಿರುತ್ತಾರೆ.

iv) ತನಿಖಾ ಕಾಲದಲ್ಲಿ ಎದುರುದಾರರ ಎರಡೂ ಕೈಬೆರಳುಗಳನ್ನು ತೊಳೆದ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಫಿನಾಪ್ತಲಿನ್ ಅಂಶ ಪತ್ತೆ ಆಗಿರುವುದು ಮತ್ತು ಎದುರುದಾರರು ದೂರುದಾರರೊಂದಿಗೆ ಮಾಡಿದ ಸಂಭಾಷಣೆಯಲ್ಲಿಯ ಧ್ವನಿಯು ಎದುರುದಾರರ ಮಾದರಿ ಧ್ವನಿಯೊಂದಿಗೆ ತಾಳೆಯಾಗುತ್ತದೆ ಎಂದು ತಜ್ಞರು ಅಭಿಪ್ರಾಯಪಟ್ಟಿರುತ್ತಾರೆ.

v) ತನಿಖಾಧಿಕಾರಿಗಳು ಪ್ರಕರಣಕ್ಕೆ ಸಂಬಂಧಿಸಿದ ಪ್ರಮುಖ ಘಟನಾವಳಿಗಳನ್ನು ಚಿತ್ರೀಕರಿಸಿರುತ್ತಾರೆ. ಎದುರುದಾರರನ್ನು ಅಂದೇ ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರಪಡಿಸಿರುತ್ತಾರೆ. ಎದುರುದಾರರನ್ನು ಅಭಿಯೋಜನೆಗೊಳಿಸಲು ಅಭಿಯೋಜನಾ ಮಂಜೂರಾತಿ ಆದೇಶವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದುಕೊಂಡಿರುತ್ತಾರೆ.

3. ಮೇಲ್ಕಂಡ ಆಪಾದನೆಗೆ ಸಂಬಂಧಿಸಿದಂತೆ, ಪರಿವೀಕ್ಷಣಾ ಟಿಪ್ಪಣಿಯನ್ನು ಎದುರುದಾರರಿಗೆ ಕಳುಹಿಸಲಾಗಿ, ಎದುರುದಾರರು ಸಲ್ಲಿಸಿದ ಸಮಜಾಯಿಷಿಯು ಈ ಕಚೇರಿಗೆ ದಿ: 20/09/2021 ರಂದು ತಲುಪಿರುತ್ತದೆ. ಎದುರುದಾರರು ತಮ್ಮ ಸಮಜಾಯಿಷಿಯಲ್ಲಿ ಬರೆದುಕೊಂಡಿರುವುದೇನೆಂದರೆ, ದೂರುದಾರರು ಗೌರವ ಧನವನ್ನು ಕೋರಿ ನೇರವಾಗಿ ನನಗೆ ಅರ್ಜಿ ಸಲ್ಲಿಸಲು ಬರುವುದಿಲ್ಲ. ಸದರಿಯವರು ಒಖಫ ರವರ ಮುಖಾಂತರ ಜಿಲ್ಲಾ ಕಚೇರಿಗೆ ಕಳುಹಿಸಬೇಕಾಗುತ್ತದೆ. ದೂರುದಾರರು ಗೌರವಧನದ ವಿಚಾರವಾಗಿ ತನ್ನನ್ನು ಭೇಟಿಯಾಗಿರುವುದಿಲ್ಲ. ದೂರುದಾರರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ನಡೆಸಿದ ಸಭೆಗಳಿಗೆ 3/4 ಬಾರಿ ಗೈರು ಹಾಜರಾಗಿರುತ್ತಾರೆ. ಚೆಕ್ ದಿನಾಂಕವನ್ನು ವಿಸ್ತರಿಸಿ ಕೊಡುವಂತೆ ದೂರುದಾರರು ಅರ್ಜಿ ಸಲ್ಲಿಸಿದ್ದು, ಅದರ ಬಗ್ಗೆ ಕ್ರಮ ಜರುಗಿಸಲು ಜಿಲ್ಲಾ ಖಜಾನೆ ಅಧಿಕಾರಿಗಳಿಗೆ ಈ ಪ್ರಕರಣ ದಾಖಲಾಗುವುದಕ್ಕಿಂತ ಮೊದಲೇ ಪತ್ರ ಬರೆದಿರುತ್ತೇನೆ. ಮುಂದುವರೆದು, ಎದುರುದಾರರು ತನಗೆ ದೃಷ್ಟಿ

ದೋಷವಿರುವುದರಿಂದ, ಅಕ್ಕಪಕ್ಕದಲ್ಲಿ ಯಾರಾದರು ನಿಂತುಕೊಂಡರೆ ಕಾಣುವುದಿಲ್ಲ. ದೂರುದಾರರು ತನ್ನ ದೃಷ್ಟಿ ದೋಷದ ದುರ್ಲಾಬ ಪಡೆದುಕೊಂಡು ತನಗೆ ತಿಳಿಯದಂತೆ ಹಣವನ್ನು ಜೇಬಿಗೆ ಹಾಕಿರುತ್ತಾನೆ. ದೂರುದಾರರ ಕೆಲಸ ತನ್ನ ಬಳಿ ಬಾಕಿ ಇರುವುದಿಲ್ಲ ಹಾಗೂ ತಾನು ಲಂಚಕ್ಕೆ ಒತ್ತಾಯ ಮಾಡಿಲ್ಲ, ಅನ್ಯಾಯವಾಗಿ ದೂರು ಕೊಟ್ಟು ಟ್ರ್ಯಾಪ್ ಮಾಡಿಸಿರುತ್ತಾರೆ. ಪ್ರಾಮಾಣಿಕವಾಗಿ ಕೆಲಸ ಮಾಡಿದ್ದರಿಂದ, ತನಗೆ ಜಿಲ್ಲಾಡಳಿತದಿಂದ ಸರ್ವೋತ್ತಮ ಪ್ರಶಸ್ತಿ ನೀಡಿದ್ದಾರೆ. ಈ ಮೇಲೆ ಹೇಳಿದ ಕಾರಣಾಗಳಿಂದಾಗಿ, ತನ್ನ ವಿರುದ್ಧ ಪ್ರಾರಂಭಿಸಬಹುದಾದ ಇಲಾಖಾ ವಿಚಾರಣೆಯನ್ನು ಕೈಬಿಡಬೇಕೆಂದು ವಿನಂತಿಸಿರುತ್ತಾರೆ. ಎದುರುದಾರರು ತನ್ನ ಸಮಜಾಯಿಷಿಯೊಂದಿಗೆ ಖಜಾನೆ ಅಧಿಕಾರಿಗೆ ಬರೆದ ಪತ್ರದ ಪ್ರತಿ, ಕಣ್ಣಿನ ಆರೋಗ್ಯದ ಕುರಿತಂತೆ ದಿವ್ಯ ಜ್ಯೋತಿ ಕಣ್ಣಿನ ಆಸ್ಪತ್ರೆಯ ಡಿಸ್ಚಾರ್ಜ್ ಸಮ್ಮರಿ, ಪ್ರಶಂಸೆ ಪತ್ರ, ಸರ್ವೋತ್ತಮ ಸೇವಾ ಪ್ರಶಸ್ತಿಯ ಪತ್ರ ಹಾಗೂ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳನ್ನು ಲಗತ್ತಿಸಿರುತ್ತಾರೆ.

4. ತನಿಖಾಧಿಕಾರಿಗಳು ತನಿಖಾ ಕಾಲದಲ್ಲಿ ಸಂಗ್ರಹಿಸಿದ ದಾಖಲೆ ಹಾಗೂ ಪಡೆದುಕೊಂಡ ಸಾಕ್ಷ್ಯದಾರಗಳನ್ನು ನಂಬದಿರಲು ಹಾಗೂ ಎದುರುದಾರರು ತಮ್ಮ ಸಮಜಾಯಿಷಿಯಲ್ಲಿ ಬರೆದುಕೊಂಡು ನಿಲ್ಲುವುಗಳನ್ನು ನಂಬಲು ಈ ಹಂತದಲ್ಲಿ ಯಾವುದೇ ಆಧಾರಗಳು ಕಂಡುಬರುವುದಿಲ್ಲ. ಎದುರುದಾರರು ಲಂಚಕ್ಕೆ ಬೇಡಿಕೆ ಇಟ್ಟ ಧ್ವನಿಯು ಸದರಿಯವರ ಮಾದರಿ ಧ್ವನಿಯೊಂದಿಗೆ ತಾಳೆಯಾದ ಬಗ್ಗೆ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ತನಗೆ ಅರಿವಿಲ್ಲದಂತೆ, ತನಗಿರುವ ದೃಷ್ಟಿ ದೋಷದ ದುರ್ಲಾಬ ಮಾಡಿಕೊಂಡು ಹಣವನ್ನು ದೂರುದಾರರು ತನ್ನ ಶರ್ಟ್ ಜೇಬಿನಲ್ಲಿ ಇಟ್ಟಿರುತ್ತಾರೆ ಎಂಬುದನ್ನು ಹಾಗೂ ತಾನು ಪ್ರಾಮಾಣಿಕತೆ ಹಾಗೂ ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿರುತ್ತೇನೆ ಎಂಬುದನ್ನು ಈ ಹಂತದಲ್ಲಿ ನಂಬಲು ಸಾಧ್ಯವಿಲ್ಲ. ಆದ್ದರಿಂದ, ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ನ್ಯಾಯತಾ ದೃಷ್ಟಿಯಿಂದ ಅತೀ ಅವಶ್ಯವಿರುತ್ತದೆ.

5. ದೂರಿನಲ್ಲಿ ಮಾಡಿದ ಆಪಾದನೆ, ಸಾಕ್ಷಿದಾರರ ಹೇಳಿಕೆಗಳು ಹಾಗೂ ತನಿಖಾ ಕಾಲಾದಲ್ಲಿ ಸಂಗ್ರಹಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಎದುರುದಾರರು ಕರ್ತವ್ಯದಲ್ಲಿ ಸಂಪೂರ್ಣ, ನೀತಿ, ನಿಷ್ಠೆ, ಹಾಗೂ ಶ್ರದ್ದೆಯನ್ನು ತೋರಿಸದೇ, ಮೇಲ್ಕಂಡಂತೆ ಭ್ರಷ್ಟಾಚಾರವೆಸಗಿ ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)(i) ರಿಂದ (iv)ನ್ನು ಉಲ್ಲಂಘಿಸಿ, ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅತೀ ಅವಶ್ಯವಿರುತ್ತದೆ.

ಕಂ/ಉಪಲೋಕ್/ಬಿಜಿಎಂ/1202/21
ಪಿ.ಓ.ಎ.ಆರ್.ಇ-5

6. ಆದ್ದರಿಂದ, ಎದುರುದಾರರ ವಿರುದ್ಧ ಶಿಸ್ತುಕ್ರಮಕ್ಕಾಗಿ ಇಲಾಖಾ ವಿಚಾರಣೆ ನಡೆಸಲು ಅನುಮತಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14 (ಎ) ಅಡಿಯಲ್ಲಿ ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡುಲಾಗಿದೆ. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(4) ಪ್ರಕಾರ ಶಿಸ್ತು ಪ್ರಾಧಿಕಾರವು ಈ ವರದಿಯ ಅನ್ವಯ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಬಗ್ಗೆ ಈ ವರದಿ ತಲುಪಿದ ದಿನಾಂಕದಿಂದ ಮೂರು (3) ತಿಂಗಳ ಒಳಗಾಗಿ ಈ ಪ್ರಾಧಿಕಾರಕ್ಕೆ ತಿಳಿಸುವುದು.

26/11/21

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಗೌರವಾನ್ವಿತ ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ, ಬೆಂಗಳೂರು.